ಡಿಪ್ಲೊಮ ಸಿಇಟಿ – 2019 – ಮೊದಲನೇ ಸುತ್ತಿನ ಸೀಟು ಹಂಚಿಕೆ

| Sl. Np. | Particulars | Date and Time |
|---|---|---|
| 1 | ನೈಜ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆ | 28-08-2019 after 6.00 pm |
| 2 | ಸೀಟು ಹಂಚಿಕೆಯಾದ ಅಭ್ಯರ್ಥಿಗಳು Choice ಅನ್ನು ಆಯ್ಕೆ ಮಾಡಲು (ನಾಲ್ಕು Choice ಗಳಲ್ಲಿ ಸೂಕ್ತವಾದ Choice ಅನ್ನು ಆಯ್ಕೆ ಮಾಡಿ) | 29-08-2019 to 30-08-2019 |
| 3 | a. ಶುಲ್ಕ ಪಾವತಿ ಮಾಡುವುದು – Choice-1 and Choice-2 ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳಿಗೆ ಮಾತ್ರ<br>b. ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಳ್ಳುವುದು – Choice-1 ಅಭ್ಯರ್ಥಿಗಳಿಗೆ ಮಾತ್ರ – ಶುಲ್ಕ ಪಾವತಿಯ ನಂತರ | 29-08-2019 to 31-08-2019 (Payment during banking hours) |
| 4 | Choice-1 ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ಕಾಲೇಜಿನಲ್ಲಿ ಪ್ರವೇಶ ಪಡೆಯಲು ಕೊನೆಯ ದಿನಾಂಕ | 04-09-2019 before 5.30 pm |

## ಅಭ್ಯರ್ಥಿಗಳಿಗೆ ಸೂಚನೆ

ಸೀಟು ಹಂಚಿಕೆಯ ಫಲಿತಾಂಶವನ್ನು ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ನಿಗದಿಪಡಿಸಿರುವ ನಾಲ್ಕು **CHOICE** ಗಳಲ್ಲಿ ಯಾವುದಾದರು ಒಂದು **CHOICE** ನ್ನು ಆಯ್ಕೆ ಮಾಡುವ ಮೊದಲು ಅಭ್ಯರ್ಥಿಗಳು ಮುಂದಿನ ಸುತ್ತುಗಳಲ್ಲಿ ಭಾಗವಹಿಸಲು ನಿಗದಿಪಡಿಸಿರುವ ಅರ್ಹತೆ ಮತ್ತು ಮುಂದಿನ ಸುತ್ತುಗಳಲ್ಲಿ ಬರಬಹುದಾದ ಸೀಟುಗಳನ್ನು ಗಮನದಲ್ಲಿಟ್ಟುಕೊಂಡು ಪೋಷಕರ ಜೊತೆ ಚರ್ಚಿಸಿ ಸೂಕ್ತವಾದ **CHOICE** ಅನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ.

ವಿವರವಾದ ಹೆಚ್ಚಿನ ಸೂಚನೆಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟನ್ನು ನೋಡಲು ಕೋರಿದೆ.

ಅಭ್ಯರ್ಥಿಗಳು CHOICE ಗಳನ್ನು ಆಯ್ಕೆ ಮಾಡಿಕೊಳ್ಳಲು, ಚಲನ್ ಅನ್ನು ಡೌನ್ ಲೋಡ್ ಮಾಡಿಕೊಳ್ಳಲು, ಬ್ಯಾಂಕಿನಲ್ಲಿ ಶುಲ್ಕ ಪಾವತಿ ಮಾಡಲು ಮತ್ತು ಪ್ರವೇಶ ಆದೇಶ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳಲು ಯಾವುದೇ ಸಹಾಯಕ ಕೇಂದ್ರಗಳಿಗೆ ಭೇಟಿ ನೀಡುವ ಅವಶ್ಯಕತೆ ಇರುವುದಿಲ್ಲ. ಈ ಮೇಲಿನ ಎಲ್ಲಾ ಚಟುವಟಿಕೆಗಳಿಗೆ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

**ಡಿಸಿಇಟಿ–2019 – ಮೊದಲ ಸುತ್ತು ಸೀಟು ಹಂಚಿಕೆ ಸೂಚನೆಗಳು**

2019ನೇ ಸಾಲಿನಲ್ಲಿ ವಿವಿಧ ಕೋರ್ಸುಗಳಿಗೆ ಸರ್ಕಾರವು ನಿಗದಿ ಪಡಿಸಿರುವ ಸೀಟ್ ಮ್ಯಾಟ್ರಿಕ್ಸ್ ಅನ್ನು ಅಳವಡಿಸಿಕೊಂಡು, ಅಭ್ಯರ್ಥಿಗಳ ಮೆರಿಟ್ ಮತ್ತು ಅಭ್ಯರ್ಥಿಗಳು ದಾಖಲಿಸಿರುವ ಆಪ್ಷನ್ ಅನ್ನು ಆಧರಿಸಿ ಸೀಟು ಹಂಚಿಕೆ ಮಾಡಲಾಗುವುದು.

ಸೀಟು ಹಂಚಿಕೆಯ ಫಲಿತಾಂಶವನ್ನು ಅಭ್ಯರ್ಥಿಗಳು ಸಿಇಟಿ ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ಅಭ್ಯರ್ಥಿಗಳಿಗೆ ಈ ಕೆಳಗೆ ವಿವರಿಸಿರುವಂತೆ ನಿರ್ಣಯಗಳನ್ನು ತೆಗೆದುಕೊಳ್ಳ ಬಹುದಾಗಿರುತ್ತದೆ.

ಅ) ಸೀಟು ಹಂಚಿಕೆ ಫಲಿತಾಂಶ ಪ್ರಕಟವಾದ ನಂತರ ಅಭ್ಯರ್ಥಿಯು ತಮಗೆ ದೊರಕಿರುವ ಸೀಟು ತೃಪ್ತಿಕರವಾಗಿದೆ ಎಂದು ಖಚಿತಪಡಿಸಿ ಕೊಳ್ಳಬೇಕು. ತೃಪ್ತಿಕರವಾಗಿದ್ದಲ್ಲಿ, Choice-1 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಆ) ಅಭ್ಯರ್ಥಿಯು ತಮಗೆ ದೊರಕಿರುವ ಸೀಟು ತೃಪ್ತಿಕರವಾಗಿದೆ ಆದರೆ ನನಗೆ ಇನ್ನೂ ಉತ್ತಮ ಸೀಟು ಬೇಕಾಗಿದೆ, ಆದ್ದರಿಂದ ನಾನು ಮುಂದಿನ ಸುತ್ತಿನಲ್ಲಿ ಭಾಗವಹಿಸುತ್ತೇನೆ ಎಂದು ನಿರ್ಣಯಿಸಿದರೆ Choice-2 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಇ) ಅಭ್ಯರ್ಥಿಯು ತಮಗೆ ಮೊದಲ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ ಆದ್ದರಿಂದ ನಾನು ಮುಂದಿನ ಸುತ್ತಿನಲ್ಲಿ ಭಾಗವಹಿಸುತ್ತೇನೆ ಎಂದು ನಿರ್ಣಯಿಸಿದರೆ Choice-3 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಈ) ಅಭ್ಯರ್ಥಿಯು ತಮಗೆ ಮೊದಲ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ ನನಗೆ ದೊರಕಿರುವ ಸೀಟು ಬೇಡ ಹಾಗೂ ನನಗೆ ಮುಂದಿನ ಸುತ್ತಿನಲ್ಲೂ ಸಹ ಯಾವುದೂ ಸೀಟು ತೆಗೆದುಕೊಳ್ಳಲು ಇಷ್ಟವಿಲ್ಲ, ನಾನು ಬೇರೆ ಸಂಸ್ಥೆಯಿಂದ ಸೀಟು ತೆಗೆದುಕೊಳ್ಳುತ್ತೇನೆ ಎಂದು ನಿರ್ಣಯಿಸಿದರೆ Choice-4 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

**Choice-1** ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.

- ಸೀಟು ಹಂಚಿಕೆ ಫಲಿತಾಂಶ ಪ್ರಕಟವಾದ ನಂತರ ಅಭ್ಯರ್ಥಿಯು ತಮಗೆ ದೊರಕಿರುವ ಸೀಟು ತೃಪ್ತಿಕರವಾಗಿದೆ ಎಂದು ಖಚಿತಪಡಿಸಿಕೊಳ್ಳಬೇಕು.
- ತೃಪ್ತಿಕರವಾಗಿದ್ದಲ್ಲಿ, Choice-1 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.
- ನಂತರ ಅದೇ ವೆಬ್ ಸೈಟ್‌ನಿಂದಲೇ ಚಲನ್ ಅನ್ನು ಡೌನ್ ಲೋಡ್ ಮಾಡಿಕೊಳ್ಳಬೇಕು / ಪ್ರಿಂಟ್ ತೆಗೆದುಕೊಳ್ಳಬೇಕು. ನಿಗದಿತ ಶುಲ್ಕವನ್ನು ಪಾವತಿಸಬೇಕು.
- ಶುಲ್ಕ ಪಾವತಿಯಾದ ನಂತರ ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಡೌನ್ ಮಾಡಿಕೊಳ್ಳಬಹುದಾಗಿದೆ.
- ನಂತರ ಪ್ರಾಧಿಕಾರದ ವೆಬ್‌ಸೈಟ್ ನಿಂದ ಪ್ರವೇಶ ಪತ್ರವನ್ನು ಪಡೆದು ನಿಗದಿ ಪಡಿಸಿದ ಜಾಗದಲ್ಲಿ ಅಭ್ಯರ್ಥಿಯು ಸಹಿಯನ್ನು ಮಾಡಬೇಕು ಹಾಗು ಎಲ್ಲಾ ಮೂಲ ದಾಖಲೆಗೊಳೊಂದಿಗೆ ಪ್ರವೇಶ ಪತ್ರದಲ್ಲಿ ಮುದ್ರಿಸುವ ಕೊನೆಯ ದಿನಾಂಕದ ಒಳಗಾಗಿ ಸಂಬಂಧಿಸಿದ ಕಾಲೇಜಿನಲ್ಲಿ ಪ್ರವೇಶ ಪಡೆಯಬೇಕು.
- ಕಾಲೇಜಿನಲ್ಲಿ ಪ್ರವೇಶ ಪಡೆದ ನಂತರ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರವೇಶ ಪಡೆದ ಬಗ್ಗೆ ದಾಖಲಿಸಬೇಕು.

**Choice-2** ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.

- Choice-2 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಹಂಚಿಕೆಯಾದ ಸೀಟಿಗೆ **ಕಡ್ಡಾಯವಾಗಿ ಶುಲ್ಕವನ್ನು ಪಾವತಿಸಬೇಕು. ಶುಲ್ಕ ಪಾವತಿ ನಂತರ ಪ್ರವೇಶ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ ಅಥವಾ ಕಾಲೇಜಿಗೆ ಹೋಗಿ ಪ್ರವೇಶ ಪಡೆಯುವಂತಿಲ್ಲ.**
- Choice-2 ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ತಮ್ಮೊಡನೆ ಉಳಿಸಿಕೊಂಡು ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಅಂದರೆ Higher Order Options ಹಂಚಿಕೆಯಾದಲ್ಲಿ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ. ಎರಡನೇ ಸುತ್ತಿನಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಮೊದಲ ಸುತ್ತಿನಲ್ಲಿ ಪಡೆದ ಸೀಟು ಅವರ ಬಳಿಯೇ ಇರುತ್ತದೆ.
- Higher Order Options ಅಂದರೆ, ಒಬ್ಬ ಅಭ್ಯರ್ಥಿಯು 180 ಆಪ್ಷನ್‌ಗಳನ್ನು ದಾಖಲಿಸಿದ್ದಲ್ಲಿ, ಇವುಗಳ ಪೈಕಿ ಮೊದಲನೇ ಸುತ್ತಿನಲ್ಲಿ ಅಭ್ಯರ್ಥಿಗೆ 123 ನೇ ಕ್ರಮಾಂಕದ ಆಪ್ಷನ್ ನ ಸೀಟು ದೊರಕಿದೆ ಎಂದು ಭಾವಿಸಿದಲ್ಲಿ, 1 ರಿಂದ 122 ನೇ ಆಪ್ಷನ್‌ಗಳ ಸೀಟುಗಳು Higher Order Options ಆಗುತ್ತದೆ. ಎರಡನೇ ಸುತ್ತಿನಲ್ಲಿ ಈ ಮೇಲಿನ ಯಾವುದೇ ಆಪ್ಷನ್‌ಗಳಿಗೆ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯಾದಲ್ಲಿ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ರದ್ದುಗೊಳ್ಳುತ್ತದೆ.

- Higher Order Options ಗಳಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟು ಅಭ್ಯರ್ಥಿಯ ಹೆಸರಿನಲ್ಲಿರುತ್ತದೆ.

**Choice-3 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು ಈ ಕೆಳಗಿನ ನಿರ್ದೇಶನಗಳನ್ನು ಪಾಲಿಸಬೇಕು.**

- Choice-3 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ.
- Choice-3 ಅಭ್ಯರ್ಥಿಗಳು ಮೊದಲ ಸುತ್ತಿನಲ್ಲಿ ಆಯ್ಕೆಯಾದ ಸೀಟು ಇಷ್ಟವಿರುವುದಿಲ್ಲ.
- Choice-3 ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ರದ್ದುಪಡಿಸಿಕೊಂಡು (ತಮ್ಮೊಡನೆ ಉಳಿಸಿಕೊಳ್ಳದೆ) ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಯಾವುದೇ ಸೀಟು ಹಂಚಿಕೆಯಾದಲ್ಲಿ ಮಾತ್ರ ಅವರು ಸೀಟನ್ನು ಆಯ್ಕೆ ಮಾಡಿಕೊಳ್ಳಬೇಕು.

## Choice-4 ಅನ್ನು ಆಯ್ಕೆ ಮಾಡುವ ಅಭ್ಯರ್ಥಿಗಳು

ಅಭ್ಯರ್ಥಿಯು ತಮಗೆ ಮೊದಲ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ ನನಗೆ ದೊರಕಿರುವ ಸೀಟು ಬೇಡ ಹಾಗೂ ನನಗೆ ಮುಂದಿನ ಸುತ್ತಿನಲ್ಲೂ ಸಹ ಯಾವುದೂ ಸೀಟು ತೆಗೆದುಕೊಳ್ಳಲು ಇಷ್ಟವಿಲ್ಲ, ನಾನು ಬೇರೆ ಸಂಸ್ಥೆಯಿಂದ ಸೀಟು ತೆಗೆದುಕೊಳ್ಳುತ್ತೇನೆ ಎಂದು ನಿರ್ಣಯಿಸಿದರೆ Choice-4 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.